ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

9

ಇಲಾಖೆ / ವಿಷಯ : DEPARTMENT / SUBJECT: ಲೋಕಾಯುಕ್ತ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 6/1/2021

# ಬಿಎಸ್‌ವೈಗೆ ಮತ್ತೆ ಸಂಕಷ್ಟ

**ವಿಕ ಸುದ್ದಿಲೋಕ** ಬೆಂಗಳೂರು 6/1/21

ಕಳೆದ ತಿಂಗಳು ದೇವರ ಬೀಸನಹಳ್ಳಿ ಡಿನೋಟಿಫಿಕೇಷನ್ ಪ್ರಕರಣದಲ್ಲಿ ಹಿನ್ನಡೆ ಅನುಭವಿಸಿದ್ದ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ಮಂಗಳವಾರ ಮತ್ತೆರಡು ಪ್ರಕರಣಗಳಲ್ಲಿ ಸಂಕಷ್ಟ ಎದುರಾಗಿದೆ.



ಗಂಗೇನಹಳ್ಳಿಯಲ್ಲಿ 1.11 ಎಕರೆ ಭೂಮಿ ಡಿನೋಟಿಫಿಕೇಷನ್ ಪ್ರಕರಣದಲ್ಲಿ ತಮ್ಮ ವಿರುದ್ಧ ಎಫ್‌ಐಆರ್ ರದ್ದುಗೊಳಿಸುವಂತೆ ಕೋರಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿರುವ ನ್ಯಾಯಾಲಯ, 25 ಸಾವಿರ ರೂ. ದಂಡ ವಿಧಿಸಿದೆ. ಆಲಂಪಾಷಾ ಸಲ್ಲಿಸಿದ್ದ ಮತ್ತೊಂದು ಖಾಸಗಿ ದೂರು ವಿಚಾರದಲ್ಲಿ ಬಿಎಸ್‌ವೈ ವಿಚಾರಣೆಗೆ ಪೂರ್ವಾನುಮತಿ ಅಗತ್ಯವಿಲ್ಲ. ಲೋಕಾಯುಕ್ತ ಪೊಲೀಸರು ತನಿಖೆ ಮುಂದುವರಿಸಬಹುದು ಎಂದು ಆದೇಶಿಸಿದೆ.

ಈ ಪ್ರಕರಣಗಳಲ್ಲಿ ವಾದ-ಪ್ರತಿವಾದ ಆಲಿಸಿ ತೀರ್ಪು ಕಾಯ್ದಿರಿಸಿದ್ದ ನ್ಯಾ.ಜಾನ್ ಮೈಕೆಲ್ ಡಿಕುನ್ಹಾ ಅವರಿದ್ದ ಏಕಸದಸ್ಯಪೀಠ ಮಂಗಳವಾರ ತೀರ್ಪು ಪ್ರಕಟಿಸಿದೆ. ಹೀಗಾಗಿ, ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮೂರು ಪ್ರಕರಣಗಳಲ್ಲಿ ಸಂಕಷ್ಟ ಎದುರಿಸುತ್ತಿದ್ದು, ಆದಷ್ಟು ಬೇಗ ಅವರು ಸುಪ್ರೀಂಕೋರ್ಟ್ ಮೊರೆ ಹೋಗಿ, ತಡೆಯಾಜ್ಞೆ ಪಡೆದುಕೊಳ್ಳಬೇಕಿದೆ.